ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಜುಲೈ 18 , 2014

ಪತ್ರಿಕಾ ಪ್ರಕಟಣೆ

# ವಿಬ್‌ಗ್ಯಾರ್ ಶಾಲೆ ಮಾನ್ಯತೆ ರದ್ದುಪಡಿಸಲು
# ಐ ಸಿ ಎಸ್ ಸಿ ಮಂಡಳಿಗೆ ರಾಜ್ಯ ಸರ್ಕಾರ ಪತ್ರ

**ಬೆಂಗಳೂರು, ಜುಲೈ 18 (ಕರ್ನಾಟಕ ವಾರ್ತೆ) :**

ಒಂದನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ಬಾಲಕಿಯ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರ ನಗರದ ಮಾರತ್‌ಹಳ್ಳಿಯಲ್ಲಿರುವ ವಿಬ್‌ಗ್ಯಾರ್ ಶಾಲೆಯ ಮಾನ್ಯತೆ ರದ್ದುಪಡಿಸುವಂತೆ ಐ ಸಿ ಎಸ್ ಸಿ ಮಂಡಳಿಗೆ ಪತ್ರ ಬರೆದಿದೆ.

ಈ ಶಾಲೆಗೆ ನೀಡಲಾಗಿರುವ ನಿರಾಪೇಕ್ಷಣಾ ಪತ್ರವನ್ನು ಹಿಂಪಡೆದು ಮಾನ್ಯತೆಯನ್ನು ರದ್ದುಪಡಿಸಬಾರದೇಕೇ ಎಂದು ಕಾರಣ ಕೇಳಿ ನೋಟೀಸ್ ಕೂಡಾ ಜಾರಿ ಮಾಡಲಾಗಿದೆ.

ಪ್ರಕರಣ ಕುರಿತು ವಿಚಾರಣೆ ನಡೆಸಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ದಕ್ಷಿಣ ವಲಯದ ಉಪ ನಿರ್ದೇಶಕರಿಗೆ ಸೂಚಿಸಲಾಗಿದ್ದು, ವಿಚಾರಣೆ ಪ್ರಗತಿಯಲ್ಲಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತ ಶ್ರೀ ಮೊಹಮ್ಮದ್ ಮೊಹಸಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

************

ಡಿ ಪಿ ಎಂ